# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಮಲ್ಲಿಕಾರ್ಜುನ ಕೆ. ಸಂಗಾವಿ, ಕಾರ್ಯಪಾಲಕ ಇಂಜಿನಿಯರ್, ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನಾ ವಿಭಾಗ, ಕೋಲಾರ ಮತ್ತು ಇತರ 3 ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಉಪ ಲೋಕಾಯುಕ್ತರಿಗೆ ವಹಿಸುವ ಬಗ್ಗೆ.

**ಓದಲಾಗಿದೆ:-** ಅಪರ ನಿಬಂಧಕರು, ವಿಚಾರಣೆಗಳು-6. ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. ಕಂಪ್ಲೆಂಟ್ /ಉಪಲೋಕ್ /ಬಿಡಿ-738 /2011/ ಎಆರ್‌ಇ-6, ದಿನಾಂಕ. 06-06-2012.

-----

## ಪ್ರಸ್ತಾವನೆ

ಶ್ರೀ ಮಲ್ಲಿಕಾರ್ಜುನ ಸಂಗಾವಿ, ಕಾರ್ಯಪಾಲಕ ಇಂಜಿನಿಯರ್, ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನಾ ವಿಭಾಗ, ಕೋಲಾರ, ಶ್ರೀ ಟಿ.ಎ.ಸೋಮಶೇಖರ್, ತಾಂತ್ರಿಕ ಸಹಾಯಕರು, ಯೋಜನಾ ವಿಭಾಗ, ಕೋಲಾರ, ಶ್ರೀ ಆರ್. ನಾಗರಾಜ್, ಸಹಾಯಕ ಇಂಜಿನಿಯರ್ ಮತ್ತು ಶ್ರೀ ಎಲ್.ಕೆ.ಶ್ರೀನಿವಾಸಮೂರ್ತಿ, ಸಹಾಯಕ ಇಂಜಿನಿಯರ್ ಯೋಜನಾ ಉಪ ವಿಭಾಗ, ಕೋಲಾರ ಇವರುಗಳು ಗುತ್ತಿಗೆದಾರರೊಂದಿಗೆ ಶಾಮೀಲಾಗಿ ಶ್ರೀನಿವಾಸಪುರ ತಾಲ್ಲೂಕಿನಲ್ಲಿ ಮೂರು ರಸ್ತೆಗಳ ಕಾಮಗಾರಿಗಳನ್ನು ಕಳಪೆ ಮಟ್ಟದಾಗಿ ನಿರ್ವಹಣೆ ಮಾಡಿರುತ್ತಾರೆಂದು ಶ್ರೀ ರಮೇಶ್ ಕುಮಾರ್, ಮಾಜಿ ಸಭಾಪತಿ, ಕರ್ನಾಟಕ ವಿಧಾನ ಸಭೆ, ಅಡ್ಡಗಲ್ ಗ್ರಾಮ, ಶ್ರೀನಿವಾಸಪುರ ತಾಲ್ಲೂಕು ಎಂಬುವವರು ಸಲ್ಲಿಸಿದ್ದ ಲಿಖಿತ ದೂರಿನ ಮೇರೆಗೆ ಜರುಗಿಸಿದ ತನಿಖೆಯಲ್ಲಿ ಇವರುಗಳು ಕಳಪೆ ಮಟ್ಟದ ಕಾಮಗಾರಿಗಳನ್ನು ನಿರ್ವಹಿಸಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14 (ಎ) ರ ಪ್ರಕಾರ ಇಲಾಖಾ ವಿಚಾರಣೆ ಜರುಗಿಸಲು ಆದೇಶಿಸಲು ಕರ್ನಾಟಕ ಉಪ ಲೋಕಾಯುಕ್ತ-1 ರವರು ಮೇಲೆ ದಿನಾಂಕ. 06-06-2012ರ ಪತ್ರದೊಂದಿಗೆ ಕಳುಹಿಸಿರುವ ವರದಿಯಲ್ಲಿ ಶಿಫಾರಸ್ಸು ಮಾಡಿದ್ದಾರೆ.

ಕರ್ನಾಟಕ ಉಪ ಲೋಕಾಯುಕ್ತರ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀ ಮಲ್ಲಿಕಾರ್ಜುನ ಕೆ. ಸಂಗಾವಿ, ಕಾರ್ಯಪಾಲಕ ಇಂಜಿನಿಯರ್, ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನಾ ವಿಭಾಗ, ಕೋಲಾರ ಮತ್ತು ಇತರ 3 ಅಧಿಕಾರಿಗಳು ಗುತ್ತಿಗೆದಾರರೊಂದಿಗೆ ಶಾಮೀಲಾಗಿ ಶ್ರೀನಿವಾಸಪುರ ತಾಲ್ಲೂಕಿನಲ್ಲಿ ಕಳಪೆ ಮಟ್ಟದ ಮೂರು ರಸ್ತೆಗಳ ಕಾಮಗಾರಿಗಳನ್ನು ನಿರ್ವಹಿಸಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಆದ್ದರಿಂದ, ಶ್ರೀ ಮಲ್ಲಿಕಾರ್ಜುನ ಕೆ. ಸಂಗಾವಿ, ಕಾರ್ಯಪಾಲಕ ಇಂಜಿನಿಯರ್, ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನಾ ವಿಭಾಗ, ಕೋಲಾರ ಮತ್ತು ಇತರ 3 ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ-1 ರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ, ಈ ಮುಂದಿನಂತೆ ಆದೇಶಿಸಿದೆ.

**ಆದೇಶ ಸಂಖ್ಯೆ ಗ್ರಾಅಪ 24 ಇಎನ್‌ಕ್ಯೂ 2012, ಬೆಂಗಳೂರು, ದಿನಾಂಕ.16-08-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಮಲ್ಲಿಕಾರ್ಜುನ ಸಂಗಾವಿ, ಕಾರ್ಯಪಾಲಕ ಇಂಜಿನಿಯರ್, ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನಾ ವಿಭಾಗ, ಕೋಲಾರ, ಶ್ರೀ ಟಿ.ಎ.ಸೋಮಶೇಖರ್, ತಾಂತ್ರಿಕ ಸಹಾಯಕರು, ಯೋಜನಾ ವಿಭಾಗ, ಕೋಲಾರ,

ಶ್ರೀ ಆರ್. ನಾಗರಾಜ್, ಸಹಾಯಕ ಇಂಜಿನಿಯರ್ ಮತ್ತು ಶ್ರೀ ಎಲ್.ಕೆ.ಶ್ರೀನಿವಾಸಮೂರ್ತಿ, ಸಹಾಯಕ ಇಂಜಿನಿಯರ್ ಯೋಜನಾ ಉಪ ವಿಭಾಗ, ಕೋಲಾರ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14(ಎ) ರ ಪ್ರಕಾರ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ-1 ರವರಿಗೆ ವಹಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

16/8/12.
(ಎನ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರಭಾರ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ

ಸಂಕಲನಕಾರರು,ಕರ್ನಾಟಕ ರಾಜ್ಯಪತ್ರ, ಬೆಂಗಳೂರು.

ಪ್ರತಿ;

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಉಪ ಲೋಕಾಯುಕ್ತ-1, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-6. ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ.
9. ಶ್ರೀ ಮಲ್ಲಿಕಾರ್ಜುನ ಸಂಗಾವಿ, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಳ್ಳಾರಿ,
10. ಶ್ರೀ ಟಿ.ಎ.ಸೋಮಶೇಖರ್, ತಾಂತ್ರಿಕ ಸಹಾಯಕರು, ಯೋಜನಾ ವಿಭಾಗ, ಕೋಲಾರ,
11. ಶ್ರೀ ಆರ್. ನಾಗರಾಜ್, ಸಹಾಯಕ ಇಂಜಿನಿಯರ್, ಯೋಜನಾ ಉಪ ವಿಭಾಗ, ಕೋಲಾರ
12. ಶ್ರೀ ಎಲ್.ಕೆ.ಶ್ರೀನಿವಾಸಮೂರ್ತಿ, ಸಹಾಯಕ ಇಂಜಿನಿಯರ್ ಯೋಜನಾ ಉಪ ವಿಭಾಗ, ಕೋಲಾರ
13. ಮಾನ್ಯ ಉಪ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಯವರಿಗೆ.
14. ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು - ಸಿ).
15. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಉಪ ಕಾರ್ಯದರ್ಶಿ(ಆಡಳಿತ-1) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
16. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಕಂಪ್ಯೂಟರ್ ಸೆಲ್